ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 2284/2017

ಪ್ರಾಸಾ:9

ದಿನಾಂಕ: 16.10.2024

| | | |
|---|---|---|
| ವಾಗ್ಮೂಲದವರ ಹೆಸರು | : | ಬಾಬು ಪದ್ದಣ್ಣ ಮೊಗದಮ |
| ತಂದೆಯ ಹೆಸರು | : | ಪದ್ದಣ್ಣ ಮೊಗದಮ |
| ವಯಸ್ಸು | : | 63 ವರ್ಷ |
| ಉದ್ಯೋಗ | : | ನಿವೃತ್ತ ಪಿ ಎಸ್ ಐ |
| ವಾಸ ಸ್ಥಳ | : | ಬೆಳಗಾವಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಭಾ. ದಂ. ಪ್ರ, ಸಂ, ಕಲಂ 299 ಸಿ ಆರ್ ಪಿ ಸಿ ರಡಿಯಲ್ಲಿ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

**(ವಿ.ಸಿ ಮೂಲಕ)**

ನಾನು ಘಟಪ್ರಭಾ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯದಿಂದ ಒಂದು ಉದ್ಘೋಷಿತ ವಾರಂಟನ್ನು ಆರೋಪಿ 3ನೇ ಆರೋಪಿ ಮಹಮ್ಮದ್ ಅರ್ಬರ್ ಎಂಬುವರ ವಿರುದ್ದ ಹೊರಡಿಸಿದ್ದು, ಅದನ್ನು ನಾನು ಪಡೆದುಕೊಂಡು ದಿ: 20-02-2019 ರಂದು ಘಟಾ ಪ್ರಭಾ ರೈಲ್ವೆ ನಿಲ್ದಾಣ ಹಾಗೂ ಗೋಕಾಕ್ ಬಸ್ಸು ನಿಲ್ದಾಣದ ಬಳಿ ಭೇಟಿ ನೀಡಿದ್ದು, ಅಲ್ಲಿನ ಸಾರ್ವಜನಿಕರನ್ನು ವಿಚಾರಿಸಲಾಗಿದ್ದು, ಆರೋಪಿಯ ಬಗ್ಗೆ ಯಾವುದೇ ವಿಚಾರಗಳು ಗೊತ್ತಾಗದೆ ತಲೆಮರೆಸಿಕೊಂಡಿರುವುದಾಗಿ ತಿಳಿದು ಬಂದಿರುತ್ತದೆ. ಆ ಕಾರಣದಿಂದ ನಾನು 30 ದಿನದೊಳಗೆ ನ್ಯಾಯಾಲಯಕ್ಕೆ ಹಾಜರಾಗಬೇಕೆಂದು ಹೇಳಿ ಟಾಂ ಟಾಂ ಮೂಲಕ ಪ್ರಚಾರ ಪಡಿಸಿದ್ದು, ನಂತರ ಉದ್ಘೋಷಿತ ವಾರಂಟಿನ ಪ್ರತಿಯನ್ನು ಗೋಕಾಕ್ ಬಸ್ ನಿಲ್ದಾಣ,

ಪಂಚಾಯಿತಿಯ ಕಾರ್ಯಲಾಯದಲ್ಲಿ ಅಂಟಿಸಿರುತ್ತೇವೆ. ನಂತರ ವಾರಂಟನ ಪ್ರತಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿ ಈ ದಿನ ವಾರಂಟನ ಪ್ರತಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-14 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು. ಮಲ್ಲಾಪುರ ಪಟ್ಟಣ ಪಂಚಾಯಿತಿಯ ವರದಿಯನ್ನು ನಿಪಿ-15 ಎಂದು ಗುರುತಿಸಲಾಯಿತು.

ಆರೋಪಿಗಳು ತಲೆಮರೆಸಿಕೊಂಡಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ. ದಂ. ಕುಂದಾಪುರ